# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 247 |
| ಸದಸ್ಯರ ಹೆಸರು | ಮಾನ್ಯ ಶ್ರೀ ಎನ್.ಎಸ್. ಬೋಸ್‌ರಾಜು |
| ಉತ್ತರಿಸುವ ದಿನಾಂಕ: | 11.07.2018 |
| ಉತ್ತರಿಸುವ ಸಚಿವರು: | ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ಮುಜರಾಯಿ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ | ಕರ್ನಾಟಕ ರಾಜ್ಯದಿಂದ ಸಾವಿರಾರು ಭಕ್ತರು ಉತ್ತರಖಾಂಡ ರಾಜ್ಯದಲ್ಲಿರುವ "ಚಾರ್‌ಧಾಮ್"ಗಳಿಗೆ ಯಾತ್ರೆ ಕೈಗೊಳ್ಳುತ್ತಿದ್ದು, ಸೂಕ್ತ ವಸತಿ, ಮಾರ್ಗದರ್ಶನ ಮುಂತಾದ ಮೂಲಭೂತ ಸೌಲಭ್ಯಗಳಿಲ್ಲದೆ ತೊಂದರೆಗಳನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಆದೇಶ ಸಂಖ್ಯೆ: ಕಂಇ 179 ಮುಅಚಿ 2014 ದಿನಾಂಕ:07.11.2014ರ ಆದೇಶದ ಅನ್ವಯ 2014-15ನೇ ಸಾಲಿನಿಂದ ಕರ್ನಾಟಕದಿಂದ ಚಾರ್‌ಧಾಮ್ ಯಾತ್ರೆಯನ್ನು ಕೈಗೊಂಡಿರುವ ಯಾತ್ರಾರ್ಥಿಗಳಿಗೆ ಸರ್ಕಾರದಿಂದ ಸಹಾಯಧನವನ್ನು ವಿತರಿಸಲಾಗುತ್ತಿದ್ದು, ಚಾರ್‌ಧಾಮ್ ಯಾತ್ರೆ ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸೂಕ್ತ ವಸತಿ, ಮಾರ್ಗದರ್ಶನ ಮುಂತಾದ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಯಾವುದೇ ಮಾರ್ಗಸೂಚಿ ಇರುವುದಿಲ್ಲ. |
| ಆ | ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರವು ಯಾವ ಕ್ರಮಗಳನ್ನು ಕೈಗೊಳ್ಳುವುದು; | ಪ್ರಶ್ನೆ ಉದ್ಭವಿಸುವುದಿಲ್ಲ. |
| ಇ | ಚಾರ್‌ಧಾಮ್ ಯಾತ್ರಾರ್ಥಿಗಳಿಗೆ ಸಹಾಯಧನ ನೀಡಲಾಗುತ್ತಿರುವ ಯೋಜನೆಯನ್ನು ಸ್ಥಗಿತಗೊಳಿಸಲಾಗಿದೆಯೇ; ಹಾಗಿದ್ದಲ್ಲಿ ಕಾರಣಗಳೇನು; | ಇಲ್ಲ.<br>ಸರ್ಕಾರದ ಆದೇಶ ಸಂಖ್ಯೆ:ಕಂಇ 70 ಮುಅಚಿ 2017 ದಿನಾಂಕ:20.09.2017ರ ಮಾರ್ಗಸೂಚಿಯನ್ವಯ ಆಯವ್ಯಯದಲ್ಲಿ ಸರ್ಕಾರದಿಂದ ಬಿಡುಗಡೆಯಾಗುವ ಅನುದಾನಕ್ಕನುಗುಣವಾಗಿ ಕರ್ನಾಟಕ ರಾಜ್ಯದಿಂದ ಚಾರ್‌ಧಾಮ್ ಯಾತ್ರೆಯನ್ನು ಕೈಗೊಳ್ಳುವ ಅರ್ಹ ಫಲಾನುಭವಿಗಳಿಗೆ ತಲಾ ರೂ.20,000/-ಗಳಂತೆ ಸಹಾಯಧನವನ್ನು ವಿತರಿಸಲಾಗುತ್ತಿದ್ದು, ಈ ಯೋಜನೆಯನ್ನು ಸ್ಥಗಿತಗೊಳಿಸಿರುವುದಿಲ್ಲ. |
| ಈ | ಸಹಾಯಧನ ಯೋಜನೆಗಳಿಗೆ ಹೆಚ್ಚಿನ ಅನುದಾನ ಒದಗಿಸಿ ಪ್ರತಿಯೊಬ್ಬ ಯಾತ್ರಾರ್ಥಿಗೂ ಕನಿಷ್ಠ 25,000/- ರೂಗಳ ಸಹಾಯ ಧನ ನೀಡಲಾಗುವುದೇ; | ಇಲ್ಲ. |

| | | |
|---|---|---|
| ಉ | ಲಾಟರಿ ವ್ಯವಸ್ಥೆ ಕೈಬಿಟ್ಟು ಪ್ರತಿಯೊಬ್ಬರಿಗೂ ಸಹಾಯ ಧನ ಮಂಜೂರು ಮಾಡಲಾಗುವುದೇ? | ಇಲ್ಲ.<br><br>2017-18ನೇ ಸಾಲಿನಲ್ಲಿ ಸ್ವೀಕೃತವಾದ ಅರ್ಜಿಗಳನ್ನು ಅನುದಾನದ ಲಭ್ಯತೆಗೆ ಅನುಗುಣವಾಗಿ ಮಾರ್ಗಸೂಚಿಯನ್ವಯ ಲಾಟರಿ ವ್ಯವಸ್ಥೆಯ ಮೂಲಕ ಪ್ರತಿ ಯಾತ್ರಾರ್ಥಿಗಳಿಗೆ ತಲಾ ರೂ.20,000/-ಗಳಂತೆ ವಿತರಿಸಲಾಗಿರುತ್ತದೆ. ಅದರನ್ವಯ 2018-19ನೇ ಸಾಲಿನಲ್ಲಿ ಸ್ವೀಕೃತವಾಗುವ ಅರ್ಜಿಗಳಿಗೆ ಅನುಗುಣವಾಗಿ ಸಹಾಯಧನ ವಿತರಿಸಲು ಕ್ರಮ ವಹಿಸಲಾಗುವುದು. |

(ಸಂಖ್ಯೆ:ಕಂಇ 99 ಮುಸಪ್ರ 2018)

(ರಾಜಶೇಖರ ಬಿ. ಪಾಟೀಲ)
ಗಣಿ ಮತ್ತು ಭೂವಿಜ್ಞಾನ ಹಾಗೂ
ಮುಜರಾಯಿ ಸಚಿವರು